**Bangalore**
**Regional News**
**05.02.2025 / 2.30 P.M.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

1. ರಾಜ್ಯಪಾಲರು ಸೂಚಿಸಿದರೆ, ಸಣ್ಣ ಹಣಕಾಸು ಸಂಸ್ಥೆಗಳ ಮಸೂದೆಯಲ್ಲಿ ಬದಲಾವಣೆಗೆ ಸಿದ್ಧ – ಗೃಹ ಸಚಿವ ಡಾ.ಜಿ.ಪರಮೇಶ್ವರ್
2. ಬೆಂಗಳೂರಿನಲ್ಲಿ ಉನ್ನತ ಶಿಕ್ಷಣ ಸಚಿವರ ಸಭೆ; ವಿವಿಧ ರಾಜ್ಯಗಳ ಉನ್ನತ ಶಿಕ್ಷಣ ಸಚಿವರು ಭಾಗಿ
3. ರಾಜ್ಯದ ವಿವಿಧೆಡೆ ಐಟಿ ದಾಳಿ; ಗುತ್ತಿಗೆದಾರರ ನಿವಾಸದಲ್ಲಿ ದಾಖಲೆಗಳ ಪರಿಶೀಲನೆ
4. ಪಂಚಾಯತ್ ರಾಜ್ ಅನುಷ್ಠಾನ ಇಲಾಖೆಗಳಿಗೆ ನರೇಗಾ ಪ್ರಶಸ್ತಿ ಘೋಷಿಸಿದ ರಾಜ್ಯ ಸರ್ಕಾರ
5. 38ನೇ ರಾಷ್ಟ್ರೀಯ ಕ್ರೀಡಾಕೂಟ; 28 ಚಿನ್ನದ ಪದಕಗಳೊಂದಿಗೆ ಕರ್ನಾಟಕಕ್ಕೆ ಅಗ್ರ ಸ್ಥಾನ

*****************

ಸಣ್ಣ ಹಣಕಾಸು ಸಂಸ್ಥೆಗಳ ಕಿರುಕುಳ ತಡೆಗೆ ಸರ್ಕಾರ ಹೊರಡಿಸಿರುವ ಸುಗ್ರೀವಾಜ್ಞೆಗೆ ರಾಜ್ಯಪಾಲರು ಬದಲಾವಣೆಗೆ ಸೂಚಿಸಿದರೆ, ಬದಲಾವಣೆ ಸಿದ್ಧವೆಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ.

ಬೆಂಗಳೂರಿನಲ್ಲಿ ಮಾತನಾಡಿದ ಅವರು, ರಾಜ್ಯಪಾಲರಿಗೆ ಈಗಾಗಲೇ ಕರಡು ಕಳುಹಿಸಲಾಗಿದೆ. ಇಂದು ಅವರು ಸಹಿ ಹಾಕುವ ನಿರೀಕ್ಷೆ ಇದೆ ಎಂದು ತಿಳಿಸಿದ್ದಾರೆ.

ರಾಜ್ಯಪಾಲರು ಸಹಿ ಹಾಕಿದರೆ ಇಂದು ಸುಗ್ರೀವಾಜ್ಞೆ ಜಾರಿಯಾಗಬಹುದು ಎಂದು ಅಭಿಪ್ರಾಯಪಟ್ಟಿದ್ದಾರೆ.

*****************

ಸಣ್ಣ ಹಣಕಾಸು ಸಂಸ್ಥೆಗಳ ದಬ್ಬಾಳಿಕೆ ವಿರುದ್ಧ ಕಠಿಣ ಕ್ರಮ ಕೈಗೊಂಡು ಕಿರುಕುಳ ತಪ್ಪಿಸಲು ಅಧಿಕಾರಿಗಳಿಗೆ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಸೂಚನೆ ನೀಡಿದ್ದಾರೆ. ಬಡಜನರ ಅವಶ್ಯಕತೆಯನ್ನು ಬಂಡವಾಳ ಮಾಡಿಕೊಳ್ಳುವ ಕೆಲವು ಅನಧಿಕೃತ ಲೇವಾದೇವಿದಾರರು ಜನರ ತುರ್ತು ಅವಶ್ಯಕತೆಗೆ ಹಣ ನೀಡಿ, ಹೆಚ್ಚು ಬಡ್ಡಿ ವಿಧಿಸಿ ಶೋಷಣೆ ಮಾಡಿದರೆ ಅಂಥವರ ವಿರುದ್ಧ ಸಾರ್ವಜನಿಕರು ಸಹಾಯವಾಣಿ ಸಂಖ್ಯೆಗಳಿಗೆ ದೂರು ನೀಡಬಹುದು. ಸೂಕ್ಷ್ಮ ಹಣಕಾಸು ಸಂಸ್ಥೆ (MFI), ಮನಿ ಲೆಂಡಿಂಗ್ ಸಂಸ್ಥೆಗಳ ನಿಯಮ ಉಲ್ಲಂಘನೆಗಳ ಕುರಿತು ಭಾರತೀಯ ರಿಸರ್ವ್ ಬ್ಯಾಂಕ್ ಸಹಾಯವಾಣಿ ಸಂಖ್ಯೆ 14448ಕ್ಕೆ ಮಾಹಿತಿ ನೀಡಬಹುದು ಎಂದು ತಿಳಿಸಿದ್ದಾರೆ.

ರಾಜ್ಯ ಸರ್ಕಾರವು ಮೈಕ್ರೋ ಫೈನಾನ್ಸ್ ಸಾಲಗಾರರಿಗೆ ಎಲ್ಲ ರೀತಿಯ ಕಾನೂನು ರಕ್ಷಣೆ ನೀಡಲು ಕ್ರಮ ವಹಿಸಿದೆ. ನೊಂದ ವ್ಯಕ್ತಿಗಳು ರಾಜ್ಯದ ಏಕೀಕೃತ ಸಹಾಯವಾಣಿ ಸಂಖ್ಯೆ: 112 ಅಥವಾ 1902 ಸಂಪರ್ಕಿಸಬಹುದು ಎಂದು ಶಾಲಿನಿ ರಜನೀಶ್ ಮಾಹಿತಿ ನೀಡಿದ್ದಾರೆ.

ಮೈಕ್ರೋ ಫೈನಾನ್ಸ್, ಲೇವಾದೇವಿ, ಗಿರವಿ ಹಣಕಾಸು ಸಂಸ್ಥೆಗಳು ಕಡ್ಡಾಯವಾಗಿ ಆರ್.ಬಿ.ಐ ಮಾರ್ಗಸೂಚಿ ಪಾಲನೆ ಮಾಡಬೇಕು ಎಂದು ಚಿತ್ರದುರ್ಗ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಎಚ್ಚರಿಕೆ ನೀಡಿದರು.

*****************

ಬೆಂಗಳೂರಿನ ಖಾಸಗಿ ಹೋಟೆಲ್ ನಲ್ಲಿ ಉನ್ನತ ಶಿಕ್ಷಣ ಸಚಿವರುಗಳ ಸಮ್ಮೇಳನ ನಡೆಯುತ್ತಿದೆ. ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್, ಗೃಹ ಸಚಿವ ಡಾ. ಜಿ ಪರಮೇಶ್ವರ್, ಉನ್ನತ ಶಿಕ್ಷಣ ಸಚಿವ ಡಾ. ಎಂ ಸಿ ಸುಧಾಕರ್, ತೆಲಂಗಾಣ ಐಟಿ ಮತ್ತು ಕೈಗಾರಿಕೆ ಸಚಿವ ಶ್ರೀಧರ್ ಬಾಬು, ತಮಿಳುನಾಡು ಉನ್ನತ ಶಿಕ್ಷಣ ಸಚಿವ ಡಾ. ಗೋವಿ ಚೆಳಿಯನ್, ಕೇರಳ ಉನ್ನತ ಶಿಕ್ಷಣ ಸಚಿವೆ ಡಾ. ಆರ್ ಬಿಂದು, ಹಿಮಾಚಲ ಪ್ರದೇಶ ಶಿಕ್ಷಣ ಸಚಿವ ರೋಹಿತ್ ಥಾಕೂರ್, ಜಾರ್ಖಂಡ್ ಉನ್ನತ ಮತ್ತು ತಾಂತ್ರಿಕ ಶಿಕ್ಷಣ ಸಚಿವ ಸುದಿವ್ಯ ಕುಮಾರ್ ಭಾಗವಹಿಸಿದ್ದಾರೆ. ಮಹಾರಾಷ್ಟ್ರ ಉನ್ನತ ಶಿಕ್ಷಣ ಸಚಿವ ಡಾ. ಚಂದ್ರಕಾಂತ್ ಪಾಟೀಲ್ ವಿಡಿಯೋ ಕಾನ್ಫರೆನ್ಸ್ ಮೂಲಕ ಪಾಲ್ಗೊಂಡಿದ್ದಾರೆ.

ಈ ವೇಳೆ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಲೋಪದೋಷಗಳಿಂದ ಕೂಡಿದ ರಾಷ್ಟ್ರೀಯ ಶಿಕ್ಷಣ ನೀತಿ ಹಿಂಪಡೆಯುವಂತೆ ಕೇಂದ್ರದ ಮೇಲೆ ಒತ್ತಡ ಹೇರಬೇಕು ಎಂದು ತಿಳಿಸಿದ್ದಾರೆ.

ವಿಶ್ವವಿದ್ಯಾಲಯಗಳ ಆಡಳಿತ ವಿಚಾರದಲ್ಲೂ ಸಾಕಷ್ಟು ಸುಧಾರಣೆ ತರಬೇಕಾಗಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಧ್ವನಿ: ಡಿ.ಕೆ.ಶಿವಕುಮಾರ್

*****************

ಬೆಂಗಳೂರು, ಮೈಸೂರು ಸೇರಿದಂತೆ ರಾಜ್ಯದ ಸುಮಾರು 30 ಸ್ಥಳಗಳಲ್ಲಿ ಇಂದು ವಿವಿಧ ಉದ್ಯಮಿಗಳ ಕಚೇರಿ ಹಾಗೂ ನಿವಾಸಗಳ ಮೇಲೆ ಐಟಿ ಅಧಿಕಾರಿಗಳು ದಾಳಿ ನಡೆಸಿದ್ದಾರೆ.

ಮೈಸೂರಿನಲ್ಲಿನ ರಾಮಕೃಷ್ಣ ನಗರದಲ್ಲಿರುವ ಗುತ್ತಿಗೆದಾರರ ನಿವಾಸ ಮತ್ತು ದೇವೇಗೌಡ ವೃತ್ತದಲ್ಲಿರುವ ಎಂ.ಪ್ರೊ. ಪ್ಯಾಲೆಸ್ ಹೋಟೆಲ್, ಛತ್ರದ ಮೇಲೆ ದಾಳಿ ನಡೆಸಿ, ದಾಖಲೆಗಳನ್ನು ಆದಾಯ ತೆರಿಗೆ ಇಲಾಖೆ ವಶಪಡಿಸಿಕೊಂಡಿದೆ. ಹತ್ತು ಐಟಿ ಅಧಿಕಾರಿಗಳ ತಂಡ ಗುತ್ತಿಗೆದಾರರ ಮನೆ ಮತ್ತು ಕಚೇರಿಗಳ ಮೇಲೆ ದಾಳಿ ನಡೆಸಿ, ದಾಖಲೆಗಳನ್ನು ಪರಿಶೀಲನೆ ನಡೆಸಿತು. ದಾಳಿ ನಡೆಸಿರುವ ಗುತ್ತಿಗೆದಾರ ರಾಜ್ಯ ಸರ್ಕಾರದ ಬಹುತೇಕ ಯೋಜನೆಗಳ ಗುತ್ತಿಗೆ ಪಡೆದುಕೊಂಡಿದ್ದು, ಇಟ್ಟಿಗೆ ಕಾರ್ಖಾನೆ ಮತ್ತು ಇತರ ವ್ಯವಹಾರಗಳನ್ನು ಹೊಂದಿದ್ದಾರೆ ಎಂದು ಐಎಎನ್‌ಎಸ್ ಸುದ್ದಿ ಸಂಸ್ಥೆ ವರದಿ ಮಾಡಿದೆ.

*****************

ರಕ್ಷಣಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್ ಹಾಗೂ ವೈಸ್ ಅಡ್ಮಿರಲ್ ಕೆ.ಸ್ವಾಮಿನಾಥನ್ ಅವರು ಇಂದು ರಕ್ಷಣಾ ಸಚಿವಾಲಯದ ಹಿರಿಯ ಅಧಿಕಾರಿಗಳೊಂದಿಗೆ ಕಾರವಾರ ನೌಕಾ ನೆಲೆಗೆ ಭೇಟಿ ನೀಡಿ, ಪ್ರಾಜೆಕ್ಟ್ ಸಿ–ಬರ್ಡ್ ಅಡಿಯಲ್ಲಿ ಮೂಲಸೌಕರ್ಯ ಅಭಿವೃದ್ಧಿಗಳನ್ನು ಪರಿಶೀಲಿಸಿದರು.

ಇದೇ ವೇಳೆ, ಕಾರವಾರದಲ್ಲಿ ಸ್ಥಾಪಿಸಲಾಗಿರುವ ಹಿರಿಯ ನಾವಿಕರ ವಸತಿ ಮತ್ತು ಮುಖ್ಯ ವಿತರಣಾ ಉಪಕೇಂದ್ರವನ್ನು ರಕ್ಷಣಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್ ಉದ್ಘಾಟಿಸಿದರು. ನೌಕಾ ಸಿಬ್ಬಂದಿಯೊಂದಿಗೆ ಹಿರಿಯ ಅಧಿಕಾರಿಗಳು ಚರ್ಚೆ ನಡೆಸಿದರು.

*****************

ನರೇಗಾ ಯೋಜನೆ ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಿದ ಪಂಚಾಯತ್‌ರಾಜ್ ಸಂಸ್ಥೆಗಳು ಹಾಗೂ ಅನುಷ್ಠಾನ ಇಲಾಖೆಗಳಿಗೆ ನರೇಗಾ ಪ್ರಶಸ್ತಿ ಘೋಷಣೆ ಮಾಡಲಾಗಿದೆ.

ಗ್ರಾಮೀಣ ಪ್ರದೇಶದಲ್ಲಿನ ಜನರು ಕೃಷಿ ಬಿಡುವಿನ ಸಮಯದಲ್ಲಿ ಕೆಲಸಕ್ಕಾಗಿ ನಗರ ಪ್ರದೇಶಗಳಿಗೆ ವಲಸೆ ಹೋಗದಂತೆ ತಡೆಯಲು ಕೇಂದ್ರ ಸರ್ಕಾರವು 2006 ರಂದು ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯನ್ನು ಜಾರಿಗೊಳಿಸಿದ ಅಂಗವಾಗಿ ಪ್ರತಿ ವರ್ಷ ಫೆಬ್ರವರಿ 2 ರಂದು ನರೇಗಾ ದಿವಸವನ್ನು ಆಚರಿಸಲಾಗುತ್ತಿದೆ. ಈ ದಿನದಂದು ಜಿಲ್ಲೆಗಳಲ್ಲಿ ನರೇಗಾ ಯೋಜನೆಯಡಿ ಸಕ್ರಿಯವಾಗಿ ಕೆಲಸ ನಿರ್ವಹಿಸಿದ ಕೂಲಿಕಾರರನ್ನು ಹಾಗೂ ಕಾಯಕ ಬಂಧುಗಳನ್ನು ಗುರುತಿಸಿ ಗೌರವಿಸಲಾಗುತ್ತಿದೆ.

2023–24ನೇ ಸಾಲಿನಲ್ಲಿ ಮಹಾತ್ಮಗಾಂಧಿ ನರೇಗಾ ಯೋಜನೆಯಡಿ 13 ಕೋಟಿ 85 ಲಕ್ಷ ಮಾನವ ದಿನಗಳ ಕೆಲಸವನ್ನು 30 ಲಕ್ಷ ಕುಟುಂಬಗಳ 54 ಲಕ್ಷಕ್ಕೂ ಹೆಚ್ಚು ಕೂಲಿಕಾರರಿಗೆ ನೀಡಲಾಗಿದೆ. ಪರಿಣಾಮಕಾರಿಯಾಗಿ ಅನುಷ್ಠಾನಿಸಿದ ಜಿಲ್ಲೆಗಳಿಗೆ ನರೇಗಾ ಪ್ರಶಸ್ತಿ ನೀಡಲಾಗುತ್ತಿದ್ದು ಈ ಬಾರಿ ಅತ್ಯುತ್ತಮ ಜಿಲ್ಲಾ ಪಂಚಾಯತ್ ಪುರಸ್ಕಾರಬೆಂಗಳೂರು ವಿಭಾಗೀಯ–ದಾವಣಗೆರೆ ಜಿಲ್ಲಾ ಪಂಚಾಯತಿ, ಬೆಳಗಾವಿ ವಿಭಾಗೀಯ–ಬಾಗಲಕೋಟೆ ಜಿಲ್ಲಾ ಪಂಚಾಯತಿ, ಕಲ್ಬುರ್ಗಿ ವಿಭಾಗೀಯ–ಬಳ್ಳಾರಿ ಜಿಲ್ಲಾ ಪಂಚಾಯತಿ, ಮೈಸೂರು ವಿಭಾಗೀಯ–ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತಿ ಪಡೆದುಕೊಂಡಿದೆ.

*****************

ಉತ್ತರಾಖಂಡ್‌ನಲ್ಲಿ ನಡೆಯುತ್ತಿರುವ 38ನೇ ರಾಷ್ಟ್ರೀಯ ಕ್ರೀಡಾಕೂಟದಲ್ಲಿ 28 ಚಿನ್ನ, 12 ಬೆಳ್ಳಿ, 13 ಕಂಚಿನ ಪದಕಗಳೊಂದಿಗೆ ಕರ್ನಾಟಕ ಪದಕ ಪಟ್ಟಿಯಲ್ಲಿ ಅಗ್ರ ಸ್ಥಾನ ಕಾಯ್ದುಕೊಂಡಿದೆ.

ಕರ್ನಾಟಕ ಇದುವರೆಗೆ ಒಟ್ಟು 53 ಪದಕಗಳನ್ನು ಗೆದ್ದಿದೆ. ಈಜುಕೊಳದಲ್ಲಿ ಪಾರಮ್ಯ ಮೆರೆದಿರುವ ರಾಜ್ಯದ ಈಜು ಪಟುಗಳು ಒಟ್ಟು 22 ಚಿನ್ನದ ಪದಕ ಜಯಿಸಿದ್ದಾರೆ. ಶ್ರೀಹರಿ ನಟರಾಜ್ ಮತ್ತು ಧೀನೀಧಿ ದೇಸಿಂಗು ಕೊನೆಯ ದಿನವೂ ಪಾರಮ್ಯ ಮೆರೆದಿದ್ದಾರೆ.

*****************

ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಹಾಸನ ಕೃಷಿ ಕಾಲೇಜನ್ನು ಬೆಂಗಳೂರು ವಿಶ್ವ ವಿದ್ಯಾನಿಲಯದ ವ್ಯಾಪ್ತಿಯಲ್ಲೇ ಉಳಿಸಬೇಕು ಎಂದು ಶಾಸಕ ಎಚ್.ಡಿ.ರೇವಣ್ಣ ಒತ್ತಾಯಿಸಿದ್ದಾರೆ.

ಹಾಸನದಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತಾಡಿದ ಅವರು, ಐತಿಹಾಸಿಕ ಹಿನ್ನೆಲೆ ಹೊಂದಿರುವ ಬೆಂಗಳೂರು ವಿಶ್ವ ವಿದ್ಯಾಲಯದ ಅಡಿಯಲ್ಲಿ ಕೃಷಿ ಕಾಲೇಜು ಇರುವುದರಿಂದ ವಿಧ್ಯಾರ್ಥಿಗಳಿಗೆ ಅನುಕೂಲ ಆಗಲಿದೆ.

ಪ್ರತಿಷ್ಟಿತ ವಿಶ್ವ ವಿದ್ಯಾನಿಲಯವಾಗಿ ಗುರುತಿಸಿಕೊಂಡಿರುವ ಬೆಂಗಳೂರು ವಿಶ್ವವಿದ್ಯಾಲಯವನ್ನು ಇಬ್ಬಾಗ ಮಾಡಬಾರದು. ರಾಜಕೀಯವಾಗಿ ಇಬ್ಬಾಗ ಮಾಡಿದರೆ, ಹೋರಾಟ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

*****************

ಕ್ಷಯಮುಕ್ತ ಭಾರತ ಉದ್ದೇಶದೊಂದಿಗೆ ಆರಂಭಗೊಂಡಿರುವ ನಿ–ಕ್ಷಯ್ ಕಾರ್ಯಕ್ರಮದಡಿ ದಾವಣಗೆರೆ ಜಿಲ್ಲಾದ್ಯಂತ 100 ದಿನಗಳ ಕ್ಷಯರೋಗ ತಪಾಸಣಾ ಅಭಿಯಾನ ಯಶಸ್ವಿಯಾಗಿ ಮುನ್ನೆಡೆದಿದೆ ಎಂದು ದಾವಣಗೆರೆ ಜಿಲ್ಲೆ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಮುರುಳೀಧರ್ ಆಕಾಶವಾಣಿಗೆ ಹೆಚ್ಚಿನ ಮಾಹಿತಿ ನೀಡಿದ್ದಾರೆ.

ಅಭಿಯಾನ ಮಾರ್ಚ್ 17 ರ ವರೆಗೂ ನಡೆಯಲಿದ್ದು, 100 ದಿನಗಳಲ್ಲಿ 2 ಲಕ್ಷ ಪ್ರಕರಣಗಳನ್ನು ಪತ್ತೆಹಚ್ಚುವ ಗುರಿಯನ್ನು ಹೊಂದಲಾಗಿದೆ ಎಂದು ಡಾ.ಮುರುಳೀಧರ್ ಅವರು ತಿಳಿಸಿದ್ದಾರೆ.

ಧ್ವನಿ: ಮುರಳೀಧರ್

*****************

ಮೈಸೂರು ಆಕಾಶವಾಣಿಗೆ 90 ವರ್ಷ ತುಂಬಿರುವ ಹಿನ್ನೆಲೆಯಲ್ಲಿ ಭಾರತ ಸರ್ಕಾರ, ಪ್ರಸಾರ ಭಾರತಿ ಹಾಗೂ ಆಕಾಶವಾಣಿ ಮೈಸೂರು ಎಫ್‌ಎಂ 100.6 ಸಹಯೋಗದೊಂದಿಗೆ ಮೈಸೂರು ಆಕಾಶವಾಣಿ–90 ಭಾವ ಜಾನಪದ ರಂಗ ಕಾರ್ಯಕ್ರಮವನ್ನು ಇದೇ 7ರಂದು ಬೆಳಿಗ್ಗೆ ಮಂಡ್ಯದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಆಕಾಶವಾಣಿ ಮೈಸೂರು ವಿಭಾಗದ ಉಪ ನಿರ್ದೇಶಕ ಎಸ್.ಎಸ್.ಉಮೇಶ್ ತಿಳಿಸಿದ್ದಾರೆ.

*********ಮುಕ್ತಾಯ********